## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಜೂನ್–2020ರ ಮಾಹೆಯ ವೇತನಾನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಅಪ್ರಾ/ಕಾ–1/23/2019–20, ದಿನಾಂಕ:15–06–2020.

*****

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರು 2020–21ನೇ ಸಾಲಿನಲ್ಲಿ ಕನ್ನಡ ಅಭಿವೃದ್ಧಿ ಪ್ರಧಿಕಾರಕ್ಕೆ ಯೋಜನಾನುದಾನಕ್ಕೆ ರೂ.200.00ಲಕ್ಷಗಳನ್ನು ಹಾಗೂ ಅಧಿಕಾರಿ / ಸಿಬ್ಬಂದಿಯ ವೇತನಕ್ಕೆ ರೂ.52.00 ಲಕ್ಷಗಳು, ಗುತ್ತಿಗೆ / ಹೊರಗುತ್ತಿಗೆ ನೌಕರರಿಗೆ ರೂ.37.00 ಲಕ್ಷಗಳನ್ನು ಆಯವ್ಯಯದಲ್ಲಿ ಮೀಸಲಿರಿಸಲಾಗಿರುತ್ತದೆ.

ಮುಂದುವರೆದು, ಕೊರೋನಾ ಕೋವಿಡ್–19 ಹಿನ್ನೆಲೆಯಲ್ಲಿ ಯೋಜನಾನುದಾನ ರೂ.200.00ಲಕ್ಷಗಳು ಬಿಡುಗಡೆಯಾಗಿರುವುದಿಲ್ಲ. ಜೂನ್–2020ರ ವೇತನಕ್ಕೆ ಅನುದಾನ ಈ ಕೆಳಕಂಡ ಲೆಕ್ಕಶೀರ್ಷಿಕೆಗಳನ್ವಯ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಕ್ರಸಂ | ಲೆಕ್ಕಶೀರ್ಷಿಕೆ | 2020–21ನೇ ಸಾಲಿನ ಆಯವ್ಯಯ ಹಂಚಿಕೆ | ಆರ್ಥಿಕ ಇಲಾಖೆಯಿಂದ ತುಟ್ಟಿ ಭತ್ಯ ತಡೆಹಿಡಿದು ಬಿಡುಗಡೆ ಮಾಡಲಾದ ಮೊತ್ತ | ಜೂನ್–2020ರ ಮಾಹೆಯ ಬಿಡುಗಡೆಗೆ ಮಾಡಬೇಕಾದ ಹಣ |
|---|---|---|---|---|
| 1. | 2205–00–102–1–81–059 | 200.00 | 0.00 | 0.00 |
| 2. | 2052–00–092–0–09–115 | 37.00 | 37.00 | 3.08 |
| 3. | 2052–00–092–0–09–101 | 52.00 | 47.71 | 3.98 |
| ಒಟ್ಟು | | **289.00** | **84.71** | **7.06** |

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 89 ಕೆಟಿಎಲ್ ಆಕ 2020, ಬೆಂಗಳೂರು, ದಿನಾಂಕ: 24.06.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು / ಸಿಬ್ಬಂದಿಯ ಜೂನ್–2020ರ ಮಾಹೆಯ ವೇತನ ರೂ.7.06ಲಕ್ಷ (ಏಳು ಲಕ್ಷ ಆರು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

....2

ಲೆಕ್ಕಶೀರ್ಷಿಕೆಯ ವಿವರಗಳು:

(ರೂ. ಲಕ್ಷಗಳಲ್ಲಿ)

| ಕ್ರಸಂ | ಲೆಕ್ಕಶೀರ್ಷಿಕೆ | 2020-21ನೇ ಸಾಲಿನ ಆಯವ್ಯಯ ಹಂಚಿಕೆ | ಜೂನ್-2020ರ ಮಾಹೆಯ ಬಿಡುಗಡೆಗೆ ಮಾಡಬೇಕಾದ ಹಣ |
|---|---|---|---|
| 1. | 2205-00-102-1-81-059 | 200.00 | 0.00 |
| 2. | 2052-00-092-0-09-115 | 37.00 | 3.08 |
| 3. | 2052-00-092-0-09-101 | 52.00 | 3.98 |
| | ಒಟ್ಟು | **289.00** | **7.06** |

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ: 30-05-2020 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ).

<u>ಪ್ರತಿಯನ್ನು</u>:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು.
4. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು
5. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ -7) ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.